ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 877 (1133)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮ ಪಂಚಾಯಿತಿಯಲ್ಲಿ ಮಂಜೂರಾದ ಮತ್ತು ಕೊರತೆಯಿರುವ ಹುದ್ದೆಯ ಕುರಿತು

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ಯಾವಾಗ ತುಂಬಲಾಗುವುದು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮಪಂಚಾಯಿತಿಗಳ ಸಂಖ್ಯೆ ಎಷ್ಟು ; ಅವುಗಳಿಗೆ ಮಂಜೂರಾತಿಯಿಂದ ಹುದ್ದೆ ಎಷ್ಟು ; ತೆರವಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ತೆರವಾಗಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತಾತ್ಕಾಲಿಕ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಎಷ್ಟು ವರ್ಷಗಳಿಂದ ಅವರು ತಾತ್ಕಾಲಿಕ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ; ಜಿಲ್ಲೆ, ತಾಲ್ಲೂಕು, (ಗ್ರಾಮಪಂಚಾಯಿತಿ ಹೆಸರು ಮತ್ತು ಹುದ್ದೆವಾರು ಮಾಹಿತಿಯನ್ನು ನೀಡುವುದು) ಅವರ ಉದ್ಯೋಗ ಭದ್ರತೆಗೆ ಸರ್ಕಾರದ ಕ್ರಮಗಳೇನು?